ವಿ.7೨ 102

3

# ಕರ್ನಾಟಕ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪುಟ್ಟಣ್ಣ, ಇವರು ನಿಯಮ 72ರಡಿ ಮಂಡಿಸಿರುವ ಸೂಚನಾ ಪತ್ರಕ್ಕೆ ಉತ್ತರ

**ವಿಷಯ:-**

ಸರ್ಕಾರಿ/ಅನುದಾನಿತ ಪ್ರೌಢಶಾಲಾ ಶಿಕ್ಷಕರಿಗೆ ದಿನಾಂಕ.01-06-2016 ರಿಂದ ಅನ್ವಯವಾಗುವಂತೆ ಮಂಜೂರು ಮಾಡಲಾದ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ.01-11-2018ರಲ್ಲಿ ಮೂಲ ವೇತನದೊಂದಿಗೆ ವಿಲೀನಗೊಳಿಸಿ ವೇತನ ನೀಡಲಾಗುತ್ತಿದೆ. ಆದರೆ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು ದಿನಾಂಕ.23-10-2020ರಂದು ಹೊರಡಿಸಿರುವ ಆದೇಶದಲ್ಲಿ ಈ ಮುಂಚೆ ನೀಡಲಾದ ಹೆಚ್ಚುವರಿ ವೇತನ ಭತ್ಯೆಗಳನ್ನು ಮರುನಿಗದಿಗೊಳಿಸಿ ಸಂಬಂಧಿಸಿದ ಶಿಕ್ಷಕರುಗಳಿಂದ ಕಟಾಯಿಸಿ ವಾಪಸ್ ಮಾಡುವಂತೆ ಆದೇಶ ಹೊರಡಿಸಿರುವುದು ನ್ಯಾಯಾಲಯದ ಆದೇಶ ಮತ್ತು ನಿಯಮಗಳಿಗೆ ವಿರುದ್ಧವಾಗಿರುವುದರಿಂದ ಆಯುಕ್ತರು ದಿನಾಂಕ.23-10-2020ರಂದು ಹೊರಡಿಸಿರುವ ಆದೇಶವನ್ನು ವಾಪಸ್ ಪಡೆದು ನ್ಯಾಯಾಲಯದ ಆದೇಶದಂತೆ ಹೆಚ್ಚುವರಿ ವೇತನ ಭತ್ಯೆಗಳನ್ನು ಮುಂದುವರೆಸಬೇಕು ಎಂಬ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಾಲಾ ಹಾಗೂ ಸಕಾಲ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ:-**

ಸರ್ಕಾರದ ಆದೇಶ ಸಂಖ್ಯೆ:ಇಡಿ:78:ಎಸ್‌ಎಲ್‌ಬಿ 2016 ದಿನಾಂಕ.15-04-2016 ರಂತೆ ಸರ್ಕಾರಿ /ಅನುದಾನಿತ ಪ್ರೌಢಶಾಲಾ ಸಹಶಿಕ್ಷಕರು/ಮುಖ್ಯಶಿಕ್ಷಕರುಗಳಿಗೆ ದಿನಾಂಕ 01-06-2016 ರಿಂದ ಅನ್ವಯವಾಗುವಂತೆ ಮಂಜೂರು ಮಾಡಲಾದ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ದಿನಾಂಕ.01-11-2018ಕ್ಕೆ ಮೂಲವೇತನದೊಂದಿಗೆ ವಿಲೀನಗೊಳಿಸುವಾಗ ಉಂಟಾದ ಗೊಂದಲಗಳಿಗೆ ಸ್ಪಷ್ಟೀಕರಣ ನೀಡುವಂತೆ ರಾಜ್ಯದ ವಿವಿಧ ಜಿಲ್ಲಾ ಉಪನಿರ್ದೇಶಕರು (ಆಡಳಿತ)ರವರು ಸ್ಪಷ್ಟೀಕರಣ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಈ ಕಛೇರಿಯ ಸುತ್ತೋಲೆ ಸಂಖ್ಯೆ: ಅಭಿಪ್ರಾಯ(1):ಪ್ರೌಶಾಶಿವೇಬವಿ-92/2020-21 ದಿನಾಂಕ.23-10-2020ರಲ್ಲಿ ದಿನಾಂಕ.01.06.2016ಕ್ಕೆ ಮಂಜೂರು ಮಾಡಿರುವ ಹೆಚ್ಚುವರಿ ವೇತನ ಬಡ್ತಿಯು ನಿಶ್ಚಿತವಾಗಿದ್ದು, ಕಾಲಕಾಲಕ್ಕೆ ಸದರಿ ಮೊತ್ತ ಪರಿಷ್ಕರಣೆಗೆ ಅವಕಾಶವಿರುವುದಿಲ್ಲ. ಆದುದರಿಂದ ಸರ್ಕಾರದ ಆದೇಶ ಸಂಖ್ಯೆ:ಆಇ 28 ಎಸ್.ಆರ್.ಪಿ 2018 ದಿನಾಂಕ.20.10.2018ರನ್ವಯ ವೇತನ ನಿಗದಿಪಡಿಸಬೇಕಾಗಿದ್ದು ಇದರ ವ್ಯತಿರಿಕ್ತವಾಗಿ ವೇತನ ನಿಗದಿಪಡಿಸಿದಲ್ಲಿ ಅಂತಹ ಪ್ರಕರಣಗಳನ್ನು ಪುನರ್ ಪರಿಶೀಲಿಸಿ ಮರುವೇತನ ನಿಗದಿಪಡಿಸುವುದು ಹಾಗೂ ಈ ಮುಂಚೆ ನೀಡಲಾದ ಹೆಚ್ಚುವರಿ ವೇತನ/ಭತ್ಯೆಗಳನ್ನು ಸಂಬಂಧಿಸಿದವರಿಂದ ಕಟಾಯಿಸಲು

ಈ ಕಛೇರಿಯ ಸುತ್ತೋಲೆ ದಿನಾಂಕ.23-10-2020ರಲ್ಲಿ ಸೂಚಿಸಲಾಗಿದೆ. ಹೆಚ್ಚುವರಿಯಾಗಿ ನಿಗದಿಸಿಪಡಿಸಿರುವ ವೇತನ/ಭತ್ಯೆಗಳನ್ನು ಸರ್ಕಾರಕ್ಕೆ ಮರುಪಾವತಿಸದಿದ್ದಲ್ಲಿ ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ನಷ್ಟ ಉಂಟಾಗುವುದರಿಂದ ದಿನಾಂಕ.23-10-2020 ರಲ್ಲಿ ನೀಡಿರುವ ಸುತ್ತೋಲೆಯನ್ನು ಹಿಂಪಡೆಯುವ ಅಗತ್ಯತೆ ಇರುವುದಿಲ್ಲ.

ಇಪಿ 72 ಎಸ್‌ಎಲ್‌ಬಿ 2021

ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು